**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ**

**SC No. 59/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀಮತಿ ಗಂಗು** | **PW - 2** |
| ಗಂಡನ ಹೆಸರು | : | **ಶೇಖರ** | **CW - 3** |
| ವಯಸ್ಸು | : | **58 ವರ್ಷ** | |
| ವೃತ್ತಿ | : | **ಕೂಲಿ ಕೆಲಸ** | |
| ವಾಸ | : | **ಕಡಗದಾಳು ಗ್ರಾಮ, ಮಡಿಕೇರಿ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 27-11-2024 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನನಗೆ ಚಾಸಾ-1 ಮತ್ತು ಪ್ರಾಸಾ-1 ಇವರ ಪರಿಚಯ ಇರುತ್ತದೆ. ಆರೋಪಿಯ ಪರಿಚಯ ಇರುವುದಿಲ್ಲ. ಆರೋಪಿತನು ಚಾಸಾ-1 ಲೋಕೇಶ್ ಇವರನ್ನು ಅವಾಚ್ಯದಿಂದ ಬೈದು ಕತ್ತಿಯಿಂದ ಕಡಿದು ಕೊಲೆ ಪ್ರಯತ್ನ ಮಾಡಿರುವುದನ್ನು ನೋಡಿರುವುದಿಲ್ಲ. ಆ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ಕೊಟ್ಟಿರುವುದಿಲ್ಲ. ನಾನು ಚಾಸಾ-1 ಮತ್ತು ಆರೋಪಿ ಮಧ್ಯೆ ಯಾವುದೇ ಜಗಳ ನೋಡಿರುವುದಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟೀಸವಾಲು- ಸರ್ಕಾರಿ ಅಭಿಯೋಜಕರಿಂದಃ</u>**

1. ದಿನಾಂಕ 11.11.2019 ರಂದು ಸಂಜೆ 4.45 ಗಂಟೆಗೆ ಕಡಗದಾಳು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ಪಕ್ಕದಲ್ಲಿ ಇರುವ ಭಾಗ್ಯ ಇವರ ಮನೆಯಲ್ಲಿ ಇದ್ದಾಗ ಗಲಾಟೆ ಶಬ್ದ ಕೇಳಿ ಸಹಕಾರ ಸಂಘಕ್ಕೆ ಹೋಗಿ ನೋಡಿದಾಗ ಆರೋಪಿತನು ಚಾಸಾ-1 ಇವರ ತಲೆಗೆ ಕತ್ತಿಯಿಂದ

ಕಡಿದದನ್ನು ನೋಡಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ. ನಂತರ ಕವಿತಾ ಇವರು ಆಸ್ಪತ್ರೆಗೆ ಗಾಯಾಳುವನ್ನು ಕರೆದುಕೊಂಡು ಹೋದರು ಎಂದು ಸೂಚಿಸುವುದು ಸರಿಯಲ್ಲ. ನಾನು ಸಾಲ ಕಟ್ಟುವುದಿಲ್ಲ ಎಂದು ಆರೋಪಿತನು ಚಾಸಾ-1 ಇವರಿಗೆ ಕತ್ತಿಯಿಂದ ಹಲ್ಲೆ ಮಾಡಿರುತ್ತಾನೆ ಎಂದು ಸೂಚಿಸುವುದು ಸರಿಯಲ್ಲ. ನಾನು ಈಗೆ ಓದಿ ಹೇಳಿದಂತೆ ಪೊಲೀಸರ ಮುಂದೆ "ನಾನು ಈ ಮೇಲ್ಕಂಡ ವಿಳಾಸದಲ್ಲಿ ..................
......... ನೋಡಿದರೆ ಗುರುತಿಸುತ್ತೇನೆ" ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ಸದರಿ ಹೇಳಿಕೆಯನ್ನು **ನಿಪಿ-4** ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು- ಆರೋಪಿ ಪರ ವಕೀಲರಾದ ಶ್ರೀ ಬಿ.ಡಿ.ಕೆ. ರವರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.